# All India Radio: Bangalore
# Regional Bulletin In Kannada
# 22.04.2026 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ರಾಜ್ಯದಲ್ಲಿ ಬೃಹತ್ ಬಂಡವಾಳ ಹೂಡಿಕೆ ಪ್ರಸ್ತಾವನೆ ಕುರಿತಂತೆ ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪಸಮಿತಿ ಸಭೆ
2. ಕೊಡಗಿನಲ್ಲಿ ಅಮೆರಿಕ ಮಹಿಳೆ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣ ; ಆರೋಪಿಗಳ ವಿರುದ್ಧ ಕಠಿಣ ಕ್ರಮ - ಗೃಹ ಸಚಿವ ಡಾ.ಜಿ.ಪರಮೇಶ್ವರ್ ಎಚ್ಚರಿಕೆ
3. ಭಾಲ್ಕಿಯ ಚೆನ್ನ ಬಸವಾಶ್ರಮದಲ್ಲಿ ಡಾ.ಬಸವಲಿಂಗ ಪಟ್ಟದೇವರ ಅಮೃತ ಮಹೋತ್ಸವ - ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಭಾಗಿ
4. ಬಡ ರೋಗಿಗಳ ಔಷಧಿ ಖರೀದಿಗೂ ಸರ್ಕಾರಕ್ಕೆ ಹಣದ ಕೊರತೆ ; ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪ

<><><><>

ರಾಜ್ಯದಲ್ಲಿ ಬೃಹತ್ ಬಂಡವಾಳ ಹೂಡಿಕೆ ಪ್ರಸ್ತಾವನೆ ವಿಶೇಷ ರಿಯಾಯಿತಿ ಮತ್ತು ಉತ್ತೇಜನ ಮಂಜೂರು ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಇಂದು ಸಚಿವ ಸಂಪುಟ ಉಪಸಮಿತಿ ಸಭೆ ನಡೆಯಿತು. ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಕೆ.ಜೆ.ಜಾರ್ಜ್, ಎಂ.ಬಿ.ಪಾಟೀಲ್, ಪ್ರಿಯಾಂಕ್ ಖರ್ಗೆ, ಶಿವಾನಂದಪಾಟೀಲ್, ಬೋಸರಾಜ್, ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿರಜನೀಶ್ ಸೇರಿದಂತೆ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

<><><><>

ಮಡಿಕೇರಿಯಲ್ಲಿ ಅಮೆರಿಕದ ಮಹಿಳಾ ಪ್ರವಾಸಿ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ ಪ್ರಕರಣ ತಡವಾಗಿ ಬೆಳಕಿಗೆ ಬಂದಿದೆ. ಈ ಕುರಿತಂತೆ ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿರುವ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಪ್ರಕರಣ ಮುಚ್ಚಿ ಹಾಕಲು ಯತ್ನ ನಡೆದಿದ್ದು, ಆ ಎಲ್ಲಾ ಪ್ರಯತ್ನಗಳನ್ನು ಪೊಲೀಸರು ವಿಫಲಗೊಳಿಸಿದ್ದಾರೆ ಎಂದು ತಿಳಿಸಿದ್ದಾರೆ. ವಿದೇಶಿಯರ ಮೇಲೆ ಈ ರೀತಿಯ ಘಟನೆ ನಡೆದರೆ ಸಮಾಜ ಹಾಗೂ ದೇಶದ ಬಗ್ಗೆ ತಪ್ಪು ಸಂದೇಶ ಹೋಗಲಿದ್ದು, ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಸ್ಪಷ್ಟಪಡಿಸಿದ್ದಾರೆ.

ಪೊನ್ನಂಪೇಟೆ ತಾಲೂಕಿನ ಕುಟ್ಟ ಗ್ರಾಮದಲ್ಲಿರುವ ಹೋಂಸ್ಟೇನಲ್ಲಿ ಈ ಘಟನೆ ನಡೆದಿದ್ದು, ಜಾರ್ಖಂಡ್ ಮೂಲದ ವೃಜೇಶ್ ಕುಮಾರ್ ಎಂಬ ಆರೋಪಿಯನ್ನು ಬಂಧಿಸಲಾಗಿದೆ. ವೈಫೈ ಸಂಪರ್ಕ ಕಡಿತಗೊಳಿಸಿ ಪ್ರಕರಣ ಮುಚ್ಚಿಹಾಕಲು ಯತ್ನಿಸಲಾಗಿತ್ತು. ವೈಫೈ ಸಂಪರ್ಕ ದೊರಕಿದ ಬಳಿಕ, ಸಂತ್ರಸ್ಥೆ ಘಟನೆ ಕುರಿತು ಅಮೆರಿಕ ರಾಯಭಾರ ಕಚೇರಿಗೆ ಮಾಹಿತಿ ನೀಡಿದ್ದಾರೆ. ಅಮೆರಿಕ ರಾಯಭಾರ ಕಚೇರಿಯ ಅಧಿಕಾರಿಗಳು ಮೈಸೂರು ಪೊಲೀಸರಿಗೆ ಇ-ಮೇಲ್ ಮೂಲಕ ಮಾಹಿತಿ ನೀಡಿದ ಬಳಿಕ ಪ್ರಕರಣ ದಾಖಲಾಗಿದೆ.

<><><><>

ವಿದೇಶಿ ಪ್ರವಾಸಿ ಮೇಲೆ ನಡೆ ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಹೋಂಸ್ಟೇ ಸಿಬ್ಬಂದಿ ಹಾಗೂ ಹೋಂಸ್ಟೇ ಮಾಲೀಕರನ್ನು ಬಂಧಿಸಲಾಗಿದೆ ಎಂದು ಕೊಡಗು ಪೊಲೀಸ್ ವರಿಷ್ಠಾಧಿಕಾರಿ ಬಿಂದುಮಣಿ ಮಾಹಿತಿ ನೀಡಿದ್ದಾರೆ. ಆರೋಪಿಗಳಿಗೆ ಮಡಿಕೇರಿ ಜಿಲ್ಲಾ ನ್ಯಾಯಾಲಯ ಮೇ ೨ ರವರೆಗೆ ನ್ಯಾಯಾಂಗ ಬಂಧನ ವಿಧಿಸಿದ್ದು, ಪ್ರಕರಣಕ್ಕೆ ಸಂಬಂಧಿತದಂತೆ ಹೆಚ್ಚಿನ ತನಿಖೆ ಕೈಗೊಳ್ಳಲಾಗಿದೆ ಎಂದೂ ಅವರು ತಿಳಿಸಿದ್ದಾರೆ.

<><><><>

ಸಾಮಾಜಿಕ ಸಮಾನತೆ ಮತ್ತು ಸಮಾಜ ಸೇವೆಯನ್ನು ಗೌರವಿಸುವ ಬಸವಣ್ಣನವರ ತತ್ವವನ್ನು ಜನಸಮೂಹ ಅನುಸರಿಸುವಂತೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಕರೆ ನೀಡಿದ್ದಾರೆ. ಬೀದರ್‌ನ ಭಾಲ್ಕಿಯ ಚೆನ್ನ ಬಸವಾಶ್ರಮದಲ್ಲಿ ನಡೆದ ಡಾ.ಬಸವಲಿಂಗ ಪಟ್ಟದೇವರು ಮಹಾಸ್ವಾಮೀಜಿಯವರ ಅಮೃತ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕರುಣೆ ಮತ್ತು ಧರ್ಮದ ಆಧಾರದ ಮೇಲೆ ಸಮಾನ ಬೇರೂರಿರುವ ಸಮಾಜವನ್ನು ಸೃಷ್ಟಿಸುವ ಸಂತಶ್ರೇಷ್ಠ ಬಸವಣ್ಣನವರ ಸಾರ್ವತ್ರಿಕ ತತ್ವಜ್ಞಾನ ಅನುಸರಿಸಲು ಎಲ್ಲರೂ ಸಂಕಲ್ಪ ತೊಡಬೇಕು ಎಂದು ತಿಳಿಸಿದ್ದಾರೆ.

ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರ 'ವಿಕಾಸ್ ಬಿ ವಿರಾಸತ್ ಬಿ' ಸಂದೇಶ ಉಲ್ಲೇಖಿಸಿದ ಉಪರಾಷ್ಟ್ರಪತಿಯವರು, ಅಭಿವೃದ್ಧಿ ಮತ್ತು ಪರಂಪರೆ ಜೊತೆಗೆ ಸಾಗಬೇಕು ಎಂದರು. ಭಾರತ ತಂತ್ರಜ್ಞಾನ ಕ್ಷೇತ್ರದಲ್ಲಿ ಪ್ರಗತಿ ಸಾಧಿಸುತ್ತಿದೆ, ಆರ್ಥಿಕ ಶಕ್ತಿಯಾಗಿ ರೂಪುಗೊಳ್ಳುತ್ತದೆ ಮತ್ತು ಜಾಗತಿಕ ಕ್ಷೇತ್ರದಲ್ಲಿ ಪ್ರಭಾವ ಬೀರಿದರು ತನ್ನ ಆಧ್ಯಾತ್ಮಿಕ ಪರಂಪರೆ ಮತ್ತು ಸಾಂಸ್ಕೃತಿಕ ಬೇರುಗಳನ್ನು ಶಕ್ತಗೊಳಿಸುತ್ತಿದೆ ಎಂದರು. ಮಹಿಳಾ ಸಬಲೀಕರಣದ ಬಗ್ಗೆ ಮಾತನಾಡಿದ ಅವರು, ನಾರಿ ಶಕ್ತಿ ಇಡೀ ಸಮಾಜವನ್ನು ಸಬಲಗೊಳಿಸುತ್ತದೆ ಎಂದು ಅಭಿಪ್ರಾಯಪಟ್ಟರು. ಕಾರ್ಯಕ್ರಮದಲ್ಲಿ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಸೂಚ್ಯವಾಗಿ ಹೇಳಿಕೆ ನೀಡಿದ ಅವರು, ಭಯೋತ್ಪಾದಕರು ಮತ್ತು ಭಯೋತ್ಪಾದಕರಿಗೆ ಭಯ ಹುಟ್ಟಿಸುವವರ ನಡುವಿನ ವ್ಯತ್ಯಾಸವನ್ನು ಅರಿಯುವಂತೆ ಸೂಚಿಸಿದರು. ಬಳಿಕ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು, ಇಂದು ಕಲಬುರಗಿಯ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಹತ್ತನೇ ಘಟಿಕೋತ್ಸವದಲ್ಲಿ ಘಟಿಕೋತ್ಸವ ಭಾಷಣ ಮಾಡಲಿದ್ದಾರೆ.

<><><><>

ಕಬಡ್ಡಿ ಪಂದ್ಯದ ಸಂದರ್ಭದಲ್ಲಿ ೫೦೦ ರೂಪಾಯಿ ಬೆಟ್ಟಿಂಗ್ ಕಟ್ಟಿದ ಆರೋಪಕ್ಕೆ ಸಂಬಂಧಿಸಿದಂತೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಪ್ರತಿಕ್ರಿಯೆ ನೀಡಿದ್ದು, ತಮ್ಮ ಮೇಲಿನ ಆರೋಪವನ್ನು ನಿರಾಕರಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮ್ಮ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ನಿರ್ದೇಶನ ನೀಡಿದ್ದ ನ್ಯಾಯಾಲಯದ ಆದೇಶ ಕುರಿತಂತೆ ಪ್ರತಿಕ್ರಿಯಿಸಿ, ತಮ್ಮ ಹೇಳಿಕೆಗಳನ್ನು ತಪ್ಪಾಗಿ ಅರ್ಥೈಸಲಾಗಿದೆ ಎಂದು ಹೇಳಿದ್ದಾರೆ. ನ್ಯಾಯಾಲಯದ ಆದೇಶವನ್ನು ಗೌರವಿಸುವುದಾಗಿ ಅವರು ತಿಳಿಸಿದ್ದಾರೆ.

<><><><>

ರಾಜ್ಯ ಸರ್ಕಾರದಲ್ಲಿ ಬಡ ರೋಗಿಗಳ ಔಷಧಿ ಖರೀದಿಗೂ ಹಣ ಇಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಬಡರೋಗಿಗಳ ಕುಟುಂಬದವರು ಹೊರಗೆ ಔಷಧಿ ಖರೀದಿಸಬೇಕಾದ ಅನಿವಾರ್ಯ ಪರಿಸ್ಥಿತಿಯಿದೆ ಎಂದು ದೂರಿದ್ದಾರೆ. ರಾಜ್ಯ ಸರ್ಕಾರ ಕೂಡಲೇ ಎಚ್ಚೆತ್ತುಕೊಂಡು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಔಷಧಿಗಳ ಲಭ್ಯತೆ ಖಚಿತಪಡಿಸಬೇಕು ಎಂದು ಆಗ್ರಹಿಸಿದ್ದಾರೆ. ಜನರ ಆರೋಗ್ಯದ ಜೊತೆ ಆಟವಾಡುವ ಸರ್ಕಾರದ ನಿರ್ಲಕ್ಷ್ಯವನ್ನು ಸಹಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

<><><><>

ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸುತ್ತಿರುವ ವೃತ್ತಿಪರ ಕೋರ್ಸ್‌ಗಳ ಪ್ರವೇಶಾತಿಗಾಗಿ ಸಾಮಾನ್ಯ ಪ್ರವೇಶ ಪರೀಕ್ಷೆ ರಾಜ್ಯಾದ್ಯಂತ ಇಂದು ಆರಂಭವಾಗಿದೆ. ಇಂದು ಗಡಿ ಭಾಗ ಮತ್ತು ಇತರ ರಾಜ್ಯಗಳ ಅಭ್ಯರ್ಥಿಗಳು ರಾಜ್ಯದ ೫ ಕೇಂದ್ರಗಳಲ್ಲಿ ಕನ್ನಡ ಭಾಷಾ ಪರೀಕ್ಷೆ ಬರೆಯುತ್ತಿದ್ದಾರೆ. ನಾಳೆ ರಾಜ್ಯ ಸೇರಿದಂತೆ ಎಲ್ಲಾ ವಿದ್ಯಾರ್ಥಿಗಳಿಗೆ ಭೌತಶಾಸ್ತ್ರ ಹಾಗೂ ರಾಸಾಯನಶಾಸ್ತ್ರ, ನಾಡಿದ್ದು ಜೀವಶಾಸ್ತ್ರ ಮತ್ತು ಗಣಿತ ಪರೀಕ್ಷೆ ನಡೆಯಲಿದೆ. ಇಂಜಿನಿಯರಿಂಗ್, ಕೃಷಿ ವಿಜ್ಞಾನ, ಪಶು ವೈದ್ಯಕೀಯ ಸೇರಿದಂತೆ ವಿವಿಧ ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕಾಗಿ ರಾಜ್ಯಾದ್ಯಂತ ಪರೀಕ್ಷೆ ನಡೆಯುತ್ತಿದೆ. ಪರೀಕ್ಷಾ ಅಕ್ರಮಗಳನ್ನು ತಡೆಯಲು ನೇಮಕಾತಿ

ಪರೀಕ್ಷೆಗಳ ಮಾದರಿಯಲ್ಲೇ ಬಿಗಿ ಭದ್ರತೆ ಕೈಗೊಳ್ಳಲಾಗಿದೆ. ರಾಜ್ಯದ ಎಲ್ಲಾ ೭೪೫ ಕೇಂದ್ರಗಳಲ್ಲಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಉತ್ತರಕನ್ನಡ, ಹಾವೇರಿ, ದಕ್ಷಿಣ ಕನ್ನಡ, ಉಡುಪಿ, ಬೆಂಗಳೂರು ಸೇರಿದಂತೆ ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಬಿಗಿಭದ್ರತೆ ಏರ್ಪಡಿಸಲಾಗಿದೆ.

<><><>

ಬೆಂಗಳೂರು ಮಹಾನಗರಕ್ಕೆ ಕಾವೇರಿ ನೀರು ಪೂರೈಸುವ ತಾತಗುಣಿಯಲ್ಲಿ ೨೨೦ ಕೆವಿಎ ವಿದ್ಯುತ್ ಸ್ಥಾವರದಲ್ಲಿ ತಾಂತ್ರಿಕ ದೋಷ ಕಂಡುಬಂದಿದ್ದು, ತಕ್ಷಣದಿಂದಲೇ ದುರಸ್ಥಿ ಕಾರ್ಯವನ್ನು ಬೆಂಗಳೂರು ಜಲಮಂಡಳಿಯು ಕೈಗೆತ್ತಿಕೊಂಡಿದೆ. ಮಂಡಳಿಯ ತಜ್ಞರ ತಂಡದಿಂದ ತಾಂತ್ರಿಕ ದೋಷ ಸರಿಪಡಿಸುವ ಕೆಲಸ ನಡೆಯುತ್ತಿದೆ. ಈ ಹಿನ್ನೆಲೆಯಲ್ಲಿ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ಇಂದು ಮಧ್ಯಾಹ್ನ ೧೨:೩೦ರಿಂದ ಮಧ್ಯಾಹ್ನ ೩ರವರೆಗೆ ಕಾವೇರಿ ನೀರು ಸರಬರಾಜುವಿನಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಜಲಮಂಡಳಿ ಅಧ್ಯಕ್ಷ ಡಾ.ವಿ.ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ.

<><><>

ಉತ್ತರಕನ್ನಡ ಜಿಲ್ಲೆಯ ಅರ್ಹ ಎಲ್ಲಾ ಹೆಣ್ಣುಮಕ್ಕಳಿಗೆ ಹೆಚ್.ಪಿ.ವಿ. ಲಸಿಕೆ ನೀಡುವಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಸೂಚನೆ ನೀಡಿದ್ದಾರೆ. ಹೆಚ್.ಪಿ.ವಿ ಲಸಿಕಾ ಕಾರ್ಯಕ್ರಮದ ಪ್ರಗತಿ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಹಿಳೆಯರಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕಂಡುಬರುವ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟಲು ಮುಂಜಾಗ್ರತಾ ಕ್ರಮವಾಗಿ ೧೪ ರಿಂದ೧೫ ವಯಸ್ಸಿನ ಹೆಣ್ಣು ಮಕ್ಕಳಿಗೆ ಲಸಿಕೆ ನೀಡುವ ಮೂಲಕ ಕ್ಯಾನ್ಸರ್‌ನಿಂದ ರಕ್ಷಿಸಬಹುದಾಗಿದೆ ಎಂದು ತಿಳಿಸಿದ್ದಾರೆ. ಹೆಚ್.ಪಿ.ವಿ. ಲಸಿಕೆಯು ಅತ್ಯಂತ ಸುರಕ್ಷಿತವಾಗಿದ್ದು, ಜಿಲ್ಲೆಯಲ್ಲಿ ಈಗಾಗಲೇ ಲಸಿಕೆ ನೀಡುವ ಕಾರ್ಯ ಆರಂಭಗೊಂಡಿದ್ದು, ಅಗತ್ಯ ಪ್ರಮಾಣದ ಲಸಿಕೆಗಳ ದಾಸ್ತಾನು ಇದೆ ಎಂದು ಮಾಹಿತಿ ನೀಡಿದ್ದಾರೆ. ಅರ್ಹ ಎಲ್ಲಾ ಹೆಣ್ಣು ಮಕ್ಕಳಿಗೆ ಲಸಿಕೆ ನೀಡಿ ಶೇಕಡ ೧೦೦ರಷ್ಟು ಪ್ರಗತಿ ಸಾಧಿಸಬೇಕು ಮತ್ತು ಲಸಿಕೆಯಿಂದ ಯಾರೂ ವಂಚಿತರಾಗದಂತೆ ಎಚ್ಚರವಹಿಸುವಂತೆ ನಿರ್ದೇಶನ ನೀಡಿದ್ದಾರೆ.

<><><>

ಚಿಕ್ಕಮಗಳೂರು ಜಿಲ್ಲೆಯ ಪ್ರಸಿದ್ದ ಯಾತ್ರಾ ಸ್ಥಳ ಶೃಂಗೇರಿಯಲ್ಲಿ ಇಂದು ಶಂಕರಾಚಾರ್ಯ ಮಹಾ ರಥೋತ್ಸವ ನೆರವೇರಿತು. ಶೃಂಗೇರಿಯ ಪ್ರಮುಖ ಬೀದಿಗಳಲ್ಲಿ ನಡೆದ ರಥೋತ್ಸವದಲ್ಲಿ ಕಿರಿಯ ಜಗದ್ಗುರು ಶ್ರೀ ವಿಧುಶೇಖರತೀರ್ಥ ಮಹಾ ಸ್ವಾಮೀಜಿ, ಮಠದ ಹಲವು ವಿಧ್ವಾಂಸರು, ಭಕ್ತರು ಪಾಲ್ಗೊಂಡಿದ್ದರು. ಇದಕ್ಕೂ ಮುನ್ನ ಶ್ರೀ ಮಠದಲ್ಲಿ ಶಂಕರಚಾರ್ಯ ಹಾಗೂ ಶಾರದಾಂಬೆಗೆ ವಿಶೇಷ ಪೂಜಾ ಕಾರ್ಯಕ್ರಮ ನಡೆಯಿತು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>